ಅ) ನಾಗರಹೊಳೆ ಅರಣ್ಯದಲ್ಲಿ ಪೊಲೀಸ್ ಇಲಾಖೆಯ ಅಧಿಕಾರಿಗಳು ಮರಗಳ ಕಳ್ಳತನದಲ್ಲಿ ಶಾಮೀಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಅಂತಹ ಅಧಿಕಾರಿಗಳ ವಿವರ ನೀಡುವುದು;

ಆ) ಅಂತಹ ಅಧಿಕಾರಿಗಳು ಇಲ್ಲಿಯವರೆಗೆ ಎಷ್ಟು ಮೊತ್ತದ ಮರಗಳನ್ನು ಕಳ್ಳತನ ಮಾಡಿದ್ದಾರೆ; (ವಿವರ ನೀಡುವುದು)

ಇ) ಆ ಅಧಿಕಾರಿಗಳನ್ನು ಅರಣ್ಯ ಇಲಾಖೆಯವರು ರಕ್ಷಿಸುತ್ತಿರುವುದು ನಿಜವೇ;

ಈ) ಹಾಗಿದ್ದರೆ, ಮರಗಳ್ಳತನದಲ್ಲಿ ಭಾಗಿಯಾಗಿದ್ದ ಎಷ್ಟು ಜನ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆ (ವಿವರ ನೀಡುವುದು)?

ಶ್ರೀ ಕೆ.ಹೆಚ್. ರಂಗನಾಥ್ (ಅರಣ್ಯ ಸಚಿವರು):

ಅ) ಒಂದು ಪ್ರಕರಣ ಸರ್ಕಾರದ ಗಮನಕ್ಕೆ ಬಂದಿದೆ.

ಕರ್ನಾಟಕ ಮೀಸಲು ಪಡೆಗೆ ಸೇರಿದ ಇಬ್ಬರು ಆರಕ್ಷಕ ಸಿಬ್ಬಂದಿಗಳು ಮರಗಳ್ಳತನದಲ್ಲಿ ಶಾಮೀಲಾಗಿರುವುದು ಕಂಡು ಬಂದಿದೆ.

1. ಶ್ರೀ ಮಹಾದೇವ ಮತ್ತು 2. ಶ್ರೀ ಪುಟ್ಟಲಿಂಗೇಗೌಡ

ಇವರು ಕರ್ನಾಟಕ ರಾಜ್ಯ ಮೀಸಲು ಪಡೆ ಘಟಕ, ಮೈಸೂರಿಗೆ ಸೇರಿದವರಾಗಿದ್ದಾರೆ.

ಶ್ರೀ ಮಹಾದೇವ ಎಂಬ ವ್ಯಕ್ತಿಯನ್ನು ಬಂಧಿಸಿ ನ್ಯಾಯಾಲಯಕ್ಕೆ ಹಾಜರುಪಡಿಸಿದ ಮೇರೆಗೆ ಅವರನ್ನು ಕೆ.ಆರ್. ನಗರ ಬಂಧೀಖಾನೆಯಲ್ಲಿ ಬಂಧಿಸಲಾಗಿದೆ. ಇನ್ನೊಬ್ಬ ಅಪರಾಧಿ ಶ್ರೀ ಪುಟ್ಟಲಿಂಗೇಗೌಡ ಇವರು ತಲೆಮರೆಸಿಕೊಂಡಿರುತ್ತಾರೆ ಹಾಗೂ ಇವರನ್ನು ಸೇವೆಯಿಂದ ಅಮಾನತ್ತುಗೊಳಿಸಲಾಗಿರುತ್ತದೆ.

ಆ) ಈ ಪ್ರಕರಣದ ಬಗ್ಗೆ ತನಿಖೆ ನಡೆಯುತ್ತಿದೆ.

ಇ) ಇಲ್ಲ.

ಈ) ಉದ್ಭವಿಸುವುದಿಲ್ಲ.

ರಾಜ್ಯದ ಬರ ಕಾಮಗಾರಿಗಾಗಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಆಹಾರಧಾನ್ಯ

2450 (3214) : ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಕಂದಾಯ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದ ಬರ ಕಾಮಗಾರಿಗಾಗಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಆಹಾರ ಧಾನ್ಯವೆಷ್ಟು;

ಆ) ಆ ಆಹಾರಧಾನ್ಯಗಳನ್ನು ಯಾವ ಯಾವ ಜಿಲ್ಲೆಗಳಿಗೆ ಎಷ್ಟೆಷ್ಟು ಬಿಡುಗಡೆ ಮಾಡಲಾಗಿದೆ; (ಜಿಲ್ಲಾವಾರು ವಿವರ ನೀಡುವುದು);

ಇ) ಈ ಆಹಾರ ಧಾನ್ಯಗಳಲ್ಲಿ ಎಷ್ಟನ್ನು ಉಪಯೋಗಿಸಲಾಗಿದೆ; ಉಳಿದಿರುವ ಆಹಾರಧಾನ್ಯವೆಷ್ಟು; (ಜಿಲ್ಲಾವಾರು ವಿವರ ನೀಡುವುದು);

ಈ) ಬರ ಕಾಮಗಾರಿಗಾಗಿ ಬಿಡುಗಡೆ ಮಾಡಿರುವ ಆಹಾರಧಾನ್ಯಗಳನ್ನು ಅಧಿಕಾರಿಗಳು ದುರುಪಯೋಗ ಪಡಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಬಂದಿದ್ದರೆ ಇಂತಹ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ;

ಊ) ಈ ಬಗ್ಗೆ ಎಷ್ಟು ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಎಂ. ಮಲ್ಲಿಕಾರ್ಜುನ ನಾಗಪ್ಪ (ಕಂದಾಯ ರಾಜ್ಯ ಸಚಿವರು):

ಅ) ಕೇಂದ್ರ ಸರ್ಕಾರ ಒಟ್ಟು 7.20 ಲಕ್ಷ ಮೆ.ಟನ್ ಆಹಾರಧಾನ್ಯ ಬಿಡುಗಡೆ ಮಾಡಿದೆ.

ಆ) ಅನುಬಂಧ–1ರಲ್ಲಿ ಲಗತ್ತಿಸಿದೆ.

ಇ) ಅನುಬಂಧ–2ರಲ್ಲಿ ಮಾಹಿತಿ ಲಭ್ಯವಿದೆ.

ಈ) ಬಂದಿದೆ.

ಉ) ಮೂರು ಪ್ರಕರಣಗಳಲ್ಲಿ ದುರುಪಯೋಗವಾಗಿರುವುದು ಗಮನಕ್ಕೆ ಬಂದಿದೆ.

ಊ) ತಪ್ಪಿತಸ್ಥರನ್ನು ವಿಚಾರಣೆ ಕಾಯ್ದೆರಿಸಿ ಸೇವೆಯಿಂದ ಅಮಾನತ್ತು ಮಾಡಲಾಗಿದೆ.

ರಾಜ್ಯದ ಬರ ಕಾಮಗಾರಿಗಳಿಗಾಗಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಹಣ

2451 (3215) : ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದ ಬರ ಕಾಮಗಾರಿಗಾಗಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಹಣ ಎಷ್ಟು;

ಆ) ಈ ಹಣವನ್ನು ಯಾವ ಯಾವ ಜಿಲ್ಲೆಗಳಿಗೆ ಬಿಡುಗಡೆ ಮಾಡಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

ಇ) ಬಿಡುಗಡೆ ಮಾಡಿರುವ ಹಣದಲ್ಲಿ ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

ಈ) ಈ ಹಣವನ್ನು ಅಧಿಕಾರಿಗಳು ದುರುಪಯೋಗಪಡಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ದುರುಪಯೋಗ ಪಡಿಸಿಕೊಂಡಿರುವ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗುವುದು?

ಉ) ಈ ಹಣದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ?

ಶ್ರೀ ಮಲ್ಲಿಕಾರ್ಜುನ ನಾಗಪ್ಪ (ಕಂದಾಯ ರಾಜ್ಯ ಸಚಿವರು):

ಅ) ಕೇಂದ್ರ ಸರ್ಕಾರವು 2002–03 ನೇ ಸಾಲಿನಲ್ಲಿ ಸಿ ಆರ್ ಎಫ್ ನಿಧಿಯಲ್ಲಿ ರೂ. 61.66 ಕೋಟಿ ಮತ್ತು ಎನ್.ಸಿ.ಸಿ.ಎಫ್ ನಿಧಿಯಡಿಯಲ್ಲಿ ರೂ. 196.88 ಕೋಟಿ 2003–04ನೇ ಸಾಲಿನಲ್ಲಿ ಎನ್.ಸಿ.ಸಿ.ಎಫ್ ನಿಧಿಯಡಿಯಲ್ಲಿ ರೂ. 10.77 ಹಾಗೂ ಸಿ ಆರ್ ಎಫ್ ನಿಧಿಯಲ್ಲಿ ರೂ. 32.37 ಕೋಟಿಯನ್ನು ಬಿಡುಗಡೆ ಮಾಡಿದೆ.

ಆ) ಪಟ್ಟಿಯನ್ನು ಅನುಬಂಧ–1ರಲ್ಲಿ ಲಗತ್ತಿಸಿದೆ.

ಇ) ಮಾಹಿತಿ ಅನುಬಂಧ–1ರಲ್ಲಿದೆ

ಈ) ಇಲ್ಲ

ಉದ್ಭವಿಸುವುದಿಲ್ಲ.

ಉ) ಉದ್ಯೋಗ ಸೃಜನೆ ಕಾಮಗಾರಿಗಳಡಿಯಲ್ಲಿ ಜಲ ಸಂರಕ್ಷಣೆ ಮತ್ತು ಜಲಾನಯನ ಅಭಿವೃದ್ಧಿ ಕಾಮಗಾರಿಗಳಲ್ಲಿ ಭೂಸಾರ ಸಂರಕ್ಷಣ ಕಾಮಗಾರಿಗಳು, ಆಸ್ತಿ ನಿರ್ಮಾಣ ಕಾಮಗಾರಿಗಳು ಹಾಗೂ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ನಿರ್ವಹಿಸಲಾಗಿದೆ.